ಓ ಎಸ್ ನಂಃ 226-21
ಪಿ ಡಬ್ಲ್ಯೂ ಃ 1

ದಿಃ 13-04-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ

21. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರಿಕೆಯನ್ನು ನನ್ನ ಮುಖ್ಯ ವಿಚಾರಣೆ ಎಂದು ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ.

22. ನಾನು ದಿನಾಂಕಃ 23-04-1990 ರ ಕ್ರಯದ ಕರಾರು ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು ಗುರುತಿಸಲಾಯಿತು. ನಾನು ಓ ಎಸ್ ನಂ 124/1992 ರ ತೀರ್ಪಿನ ಮತ್ತು ಡಿಕ್ರಿಯ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 2 ಮತ್ತು 3 ಎಂದು ಗುರುತಿಸಲಾಯಿತು. ನಾನು ಆರ್ ಎಸ್ ಎ ನಂ 2606/2006 ರ ತೀರ್ಪಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು. ನಾನು ರಿವಿಜನ್ ಪಿಟಿಷನ್ ನಂ 266/2016 ರ ತೀರ್ಪಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು. ನಾನು ಎಸ್ ಎಲ್ ಎ (ಸಿ) ನಂ 25552/2016 ರ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 6 ಎಂದು ಗುರುತಿಸಲಾಯಿತು.
ಮುಂದುವರೆದ ಮುಖ್ಯ ವಿಚಾರಣೆ ಮುಂದುವರೆಸಲು ಕಾಲವಕಾಶ ಕೋರಿದ್ದಾರೆ ನೀಡಲಾಗಿದೆ.

(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ಮಾಗಡಿ.